**All India Radio: Bangalore**
**Regional Bulletin In Kannada**
**01.05.2026 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**01.05.2026 / 6.40 p.m.**

**<><><><>**

ಮುಖ್ಯಾಂಶಗಳು

೧. ಕಾರ್ಮಿಕರು ದೇಶದ ಆರ್ಥಿಕ, ಸಾಮಾಜಿಕ ಅಭಿವೃದ್ಧಿಯ ಶಿಲ್ಪಿಗಳು - ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ

೨. ಬೆಂಗಳೂರಿನಲ್ಲಿ ವಿವಿಧ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೩. ತುಮಕೂರಿನಲ್ಲಿ ಸಾವನ್ನಪ್ಪಿದ ನವಿಲುಗಳಲ್ಲಿ ಹೆಚ್-೫ ಎನ್-೧ ದೃಢ ; ಜಿಲ್ಲಾಧಿಕಾರಿ ಶುಭ್ ಕಲ್ಯಾಣ್ ಸ್ಪಷ್ಟನೆ

೪. ನಾಳೆ ೨೦೨೩ರಲ್ಲಿ ನಡೆದ ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆ ; ಜಿಲ್ಲಾಡಳಿತದಿಂದ ಬಿಗಿ ಭದ್ರತೆ

೫. ಕರಾವಳಿ, ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಇಂದು ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ

<><><><>

ಕಾರ್ಮಿಕರು ದೇಶದ ಆರ್ಥಿಕ, ಸಾಮಾಜಿಕ ಅಭಿವೃದ್ಧಿಯ ಶಿಲ್ಪಿಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದಲ್ಲಿ ಕಾಯಕಕ್ಕೆ ಸಮಾನ ಗೌರವ ಲಭಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಕಾರ್ಮಿಕರು ಕೆಲಸದ ವೇಳೆ ಮೃತಪಟ್ಟರೆ ಅವರಿಗೆ ನೀಡುತ್ತಿದ್ದ ೫ ಲಕ್ಷ ರೂಪಾಯಿ ಪರಿಹಾರ ಮೊತ್ತವನ್ನು ೮ ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದು ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ ೩೦ ಸಾವಿರದ ೨೫೬ ಮಂದಿ ಗಿಗ್ ಕಾರ್ಮಿಕರನ್ನು ನೋಂದಾಯಿಸಲಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಕೇಂದ್ರ ಕಾರ್ಮಿಕ ನೀತಿ ವಿರುದ್ಧ ಅಸಮಧಾನ ವ್ಯಕ್ತಪಡಿಸಿದ ಅವರು, ಕೇಂದ್ರ ಸರ್ಕಾರ ಕಾರ್ಪೋರೇಟ್ ಸಂಸ್ಥೆಗಳ ಪರವಾಗಿದೆ ಎಂದು ದೂರಿದ್ದಾರೆ.

ಧ್ವನಿ : ಸಿದ್ದರಾಮಯ್ಯ ( ೪೦ ಸೆಕೆಂಡುಗಳು)

<><><><>

ಬೆಂಗಳೂರಿನ ಸಿಲ್ಕ್ ಬೋರ್ಡ್‌ನಿಂದ ರಾಗಿಗುಡ್ಡ ಜಂಕ್ಷನ್‌ವರೆಗಿನ ಡಬಲ್ ಡೆಕ್ಕರ್-ರೈಲು ಜೊತೆಗೆ ಮೇಲ್ಸೇತುವೆ ರಸ್ತೆಯನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಉದ್ಘಾಟಿಸಿದರು. ಬಳಿಕ ಅವರು, ಬನಶಂಕರಿ ಬಸ್ ನಿಲ್ದಾಣದ ಜಂಕ್ಷನ್‌ನಲ್ಲಿ ಸ್ಕೈವಾಕ್ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು. ಇದೇ ವೇಳೆ ಗಾಂಧಿಬಜಾರ್‌ನ ನೂತನ ವಾಣಿಜ್ಯ ಸಂಕೀರ್ಣ ಹಾಗೂ ಬಹುಮಹಡಿ ವಾಹನ ನಿಲುಗಡೆ ಕಟ್ಟಡವನ್ನು ಲೋಕಾರ್ಪಣೆಗೊಳಿಸಿದರು. ಈ ಸಂದರ್ಭದಲ್ಲಿ ಸಚಿವ ರಾಮಲಿಂಗಾರೆಡ್ಡಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

<><><><>

ತುಮಕೂರು ತಾಲ್ಲೂಕಿನ ಊರ್ಡಿಗೆರೆ ಹೋಬಳಿ ಬೊಮ್ಮನಹಳ್ಳಿ, ಕೋಳಿಹಳ್ಳಿ ಹಾಗೂ ಗೂಳೂರು ಹೋಬಳಿ ಬೈರಸಂದ್ರ ಮತ್ತು ಹುಲ್ಲೇನಹಳ್ಳಿ ಗ್ರಾಮದಲ್ಲಿ ಸಾವನ್ನಪ್ಪಿದ ನವಿಲುಗಳಲ್ಲಿ ಹೆಚ್ ೫ ಎನ್ ೧ ಜ್ವರ ಇರುವುದು ದೃಢಪಟ್ಟಿದೆ ಎಂದು ಜಿಲ್ಲಾಧಿಕಾರಿ ಶುಭ್ ಕಲ್ಯಾಣ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ೪೫ ನವಿಲುಗಳು ಸಂಶಯಾಸ್ಪದವಾಗಿ ಸಾವನ್ನಪ್ಪಿದ ಹಿನ್ನಲೆಯಲ್ಲಿ ಅದರ ಮಾದರಿಯನ್ನು ಮಧ್ಯಪ್ರದೇಶ ಭೂಪಾಲ್ ನಲ್ಲಿರುವ ರಾಷ್ಟ್ರೀಯ ಹಕ್ಕಿ ಸುರಕ್ಷತಾ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ನವಿಲುಗಳ ಮಾದರಿಯಲ್ಲಿ ಹೆಚ್ ೫ ಎನ್ ೧ ಜ್ವರ ಇರುವುದು ದೃಢಪಟ್ಟ ಹಿನ್ನಲೆಯಲ್ಲಿ ಈ ಗ್ರಾಮಗಳನ್ನು ಕಂಟೋನ್ಮೆಂಟ್ ಮಾಡಲಾಗಿದ್ದು, ಈ ವ್ಯಾಪ್ತಿಯಲ್ಲಿರುವ ೧೦ಕ್ಕೂ ಹೆಚ್ಚು ಕೋಳಿ ಫಾರಂಗಳ ಮೇಲೆ ನಿಗಾವಹಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಶುಭ್ ಕಲ್ಯಾಣ್

<><><><>

ಉಚ್ಚ ನ್ಯಾಯಾಲಯದ ಅದೇಶ ಹಾಗೂ ಚುನಾವಣಾ ಆಯೋಗದ ನಿರ್ದೇಶನದಂತೆ ನಾಳೆ ೨೦೨೩ರಲ್ಲಿ ನಡೆದ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ವಿಧಾನ ಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆ ನಡೆಯಲಿದೆ. ಇದಕ್ಕಾಗಿ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಐ.ಡಿ.ಎಸ್.ಜಿ ಕಾಲೇಜಿನಲ್ಲಿ ಬೆಳಗ್ಗೆ ೮ ಗಂಟೆಯಿಂದ ಮತ ಏಣಿಕೆ ನಡೆಯಲಿದೆ ಎಂದು ಜಿಲ್ಲಾಡಳಿತ ತಿಳಿಸಿದೆ. ಮತ ಎಣಿಕೆ ಸಂದರ್ಭದಲ್ಲಿ ಹಾಲಿ ಶಾಸಕ ಟಿ.ಡಿ ರಾಜೇಗೌಡ ಸೇರಿ ಅಂದು ಸ್ಪರ್ಧೆ ಮಾಡಿದ್ದ ೧೩ ಅಭ್ಯರ್ಥಿಗಳು ಖುದ್ದು ಹಾಜರಿರಲು ಸೂಚಿಸಲಾಗಿದೆ. ಮತ ಎಣಿಕೆ ಕೇಂದ್ರದಲ್ಲಿ ಸಿ.ಸಿ.ಟಿವಿ ಅಳವಡಿಕೆ ಹಾಗು ವಿಡಿಯೋ ಚಿತ್ರೀಕರಣ ವ್ಯವಸ್ಥೆ ಮಾಡಲಾಗಿದೆ. ಮತ ಎಣಿಕೆ ಕೇಂದ್ರದ ಸುತ್ತ ನಾಳೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ೫೦೦ಕ್ಕೂ ಹೆಚ್ಚು ಪೊಲೀಸರಿಂದ ಬಂದೋಬಸ್ತ್ ಕಾರ್ಯ ಕೈಗೊಳ್ಳಲಾಗಿದೆ ಎಂದು ಜಿಲ್ಲಾಡಳಿತ ಸ್ಪಷ್ಟಪಡಿಸಿದೆ.

<><><><>

ರಾಜ್ಯದಲ್ಲಿ ಆರೋಗ್ಯ ಸೇವೆಗಳ ಬಲವರ್ಧನೆ ಮತ್ತು ಕಾರ್ಮಿಕರ ಸಬಲೀಕರಣ ಹಿನ್ನಲೆಯಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರಗಳ ಸಚಿವ ಡಾ.ಮನ್ಸುಖ್ ಮಾಂಡವೀಯ, ಭಾನುವಾರ ದೊಡ್ಡಬಳ್ಳಾಪುರದಲ್ಲಿ ೧೦೦ ಹಾಸಿಗೆಗಳ ಇಎಸ್ಐಸಿ ಆಸ್ಪತ್ರೆಯನ್ನು ಉದ್ಘಾಟಿಸಲಿದ್ದಾರೆ. ಬಳ್ಳಾರಿಯಲ್ಲಿ ನೂರು ಹಾಸಿಗೆಗಳ ಇಎಸ್ಐಸಿ ಆಸ್ಪತ್ರೆಗೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಅತಿಸಣ್ಣ ಉದ್ಯಮಗಳ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಈ ಆಸ್ಪತ್ರೆಯು ವಿಮಾದಾರರು ಮತ್ತು ಅವರ ಕುಟುಂಬಗಳಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲಿದೆ.

<><><><>

ದೇಶದ ಭವ್ಯ ಭವಿಷ್ಯವನ್ನು ನಿರ್ಮಿಸುವಲ್ಲಿ ಕಟ್ಟಡ ಕಾರ್ಮಿಕರ ಪಾತ್ರ ಅನನ್ಯ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಗದಗದಲ್ಲಿ ಹಮ್ಮಿಕೊಳ್ಳಲಾಗಿದ್ದ "ಕಾರ್ಮಿಕ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕಾರ್ಮಿಕರ ಹಿತರಕ್ಷಣೆಗಾಗಿ ಸರ್ಕಾರ ಜಾರಿಗೆ ತಂದಿರುವ ವಿವಿಧ ಯೋಜನೆಗಳು ಅವರಿಗೆ ಶ್ರೀರಕ್ಷೆಯಾಗಿವೆ ಎಂದು ಹೇಳಿದ್ದಾರೆ. ಇದೇ ಸಂದರ್ಭದಲ್ಲಿ ಪ್ರಸಕ್ತ ಸಾಲಿನ ಎಸ್ಎಸ್ಎಲ್ಸಿ ಹಾಗೂ ಪಿಯುಸಿಯಲ್ಲಿ ಶೇಕಡ ೮೫ ಕ್ಕೂ ಹೆಚ್ಚು ಅಂಕ ಪಡೆದ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿದರು.

<><><>

ಕೇಂದ್ರ ಸರ್ಕಾರವು ೨೯ ಹಳೆಯ ಕಾರ್ಮಿಕ ಕಾನೂನುಗಳನ್ನು ಸರಳೀಕರಿಸಿ ೪ ಹೊಸ ಕಾರ್ಮಿಕ ಸಂಹಿತೆಗಳನ್ನು ರೂಪಿಸಿದ್ದರಿಂದ ಕಾರ್ಮಿಕರಿಗೆ ಸಾಕಷ್ಟು ಅನುಕೂಲವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಪ್ರಾಯ ಪಟ್ಟಿದ್ದಾರೆ. ವಿಶ್ವ ಕಾರ್ಮಿಕರ ದಿನಾಚರಣೆ ಅಂಗವಾಗಿ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಶ್ರಮಿಕ ದಿವಸ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದೇಶ ಅಭಿವೃದ್ಧಿಯ ಥದಲ್ಲಿ ಸಾಗಲು ಮಹತ್ವದ ಕೊಡುಗೆ ನೀಡುತ್ತಿರುವ ಶ್ರಮಿಕ ವರ್ಗದ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ಹಲವು ಯೋಜನೆಗಳನ್ನು ಜಾರಿ ಮಾಡಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಈ ಹಿಂದೆ ಬಿಜೆಪಿ ಅಧಿಕಾರದಲ್ಲಿ ಇದ್ದಾಗಲೂ ಕಾರ್ಮಿಕರ ಅನುಕೂಲಕ್ಕಾಗಿ ಸಾಕಷ್ಟು ನೆರವು ನೀಡಲಾಗಿತ್ತು ಎಂದು ಹೇಳಿದ್ದಾರೆ.

<><><>

ದಕ್ಷಿಣ ಕನ್ನಡ ಜಿಲ್ಲೆಯ ಗುರುವಾಯನಕೆರೆಯಿಂದ ಉಪ್ಪಿನಂಗಡಿವರೆಗಿನ ರಾಜ್ಯ ಹೆದ್ದಾರಿ ಅಭಿವೃದ್ಧಿಪಡಿಸಲು ೧೩ ಕೋಟಿ ರೂಪಾಯಿ ಅಂದಾಜುಪಟ್ಟಿಗೆ ರಾಜ್ಯ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಗುರುವಾಯನಕೆರೆಯಿಂದ ಉಪ್ಪಿನಂಗಡಿವರೆಗಿನ ರಾಜ್ಯ ಹೆದ್ದಾರಿಯು ಗುಡ್ಡ, ಇಳಿಜಾರು ಮತ್ತು ತಿರುವು ಹೊಂದಿರುವ ರಸ್ತೆಯಾಗಿದೆ. ಇದು ಬೆಂಗಳೂರು, ಮಂಗಳೂರು ಹಾಗೂ ಧರ್ಮಸ್ಥಳ, ವೇಣೂರು, ಉಪ್ಪಿನಂಗಡಿ ಸಹಸ್ರಲಿಂಗೇಶ್ವರ ದೇವಾಲಯ, ಪುತ್ತೂರು ಮಹಾಲಿಂಗೇಶ್ವರ ದೇವಸ್ಥಾನಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಹೆದ್ದಾರಿಯಾಗಿದೆ.

ಜಿಲ್ಲೆಯ ಪ್ರಮುಖ ಸಂಪರ್ಕ ರಸ್ತೆಯಾಗಿರುವ ಗುರುವಾಯನಕೆರೆಯಿಂದ ಉಪ್ಪಿನಂಗಡಿವರೆಗಿನ ರಾಜ್ಯ ಹೆದ್ದಾರಿಯನ್ನು ಅಭಿವೃದ್ಧಿಪಡಿಸುವ ದೀರ್ಘಕಾಲದ ಬೇಡಿಕೆಯನ್ನು ಈಡೇರಿಸಿದ್ದಕ್ಕಾಗಿ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

<><><>

ಮಂಗಳೂರಿನ ಅಭಿವೃದ್ಧಿಯಲ್ಲಿ ಕೆನರಾ ಅಸೋಸಿಯೇಷನ್ ಕೊಡುಗೆ ಅಪಾರ ಎಂದು ವಿಧಾನಸಭೆಯ ಸ್ಪೀಕರ್ ಯು.ಟಿ.ಖಾದರ್ ತಿಳಿಸಿದ್ದಾರೆ. ಕೆನರಾ ಇಂಡಸ್ಟ್ರೀಸ್ ಅಸೋಸಿಯೇಷನ್ ವತಿಯಿಂದ ಮಂಗಳೂರಿನ ಕರಾವಳಿ ಮೈದಾನದಲ್ಲಿಂದು ನಡೆದ ಕೆನರಾ ಇಂಜಿನಿಯರಿಂಗ್ ಇಂಡಸ್ಟ್ರಿಯಲ್ ಟೆಕ್-ಎಕ್ಸ್‌ಪೋ ೨೦೨೬ ಉದ್ಘಾಟಿಸಿ ಮಾತನಾಡಿದರು.

<><><>

ದಕ್ಷಿಣ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಕರಾವಳಿ ಕರ್ನಾಟಕ ಮತ್ತು ಉತ್ತರ ಒಳನಾಡಿನ ಒಂದೆರಡು ಕಡೆ ಮಳೆಯಾಗಿದೆ. ಕರಾವಳಿ ಜಿಲ್ಲೆಗಳು, ಉತ್ತರ ಒಳನಾಡು ಹಾಗೂ ಬೆಂಗಳೂರಿನಲ್ಲಿ ಇಂದು ರಾತ್ರಿಯ ವೇಳೆಗೆ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಬಳ್ಳಾರಿ, ಬೆಂಗಳೂರು, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ರಾಮನಗರ ಹಾಗೂ ಉತ್ತರ ಒಳನಾಡು ಜಿಲ್ಲೆಗಳಾದ ಕಲಬುರಗಿ, ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ಭಗವಾನ್ ಬುದ್ಧ ಅಹಿಂಸೆ, ಸತ್ಯ, ದಯೆ ಎಂಬ ಮಹತ್ವದ ತತ್ವಗಳನ್ನು ಬೋಧಿಸಿ, ಜ್ಞಾನದ ಬೆಳಕನ್ನು ಜಗತ್ತಿಗೇ ಸಾರಿದಂತಹ ಮಹಾನ್ ಪುರುಷ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಹೇಳಿದ್ದಾರೆ. ವಿಜಯನಗರ ಜಿಲ್ಲೆ ಹೊಸಪೇಟೆ ನಗರದ ಡಾಕ್ಟರ್ ಬಿ.ಆರ್ ಅಂಬೇಡ್ಕರ್ ವೃತ್ತದಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ಇಂದು ಬುದ್ಧ

ಜಯಂತಿ ಆಚರಿಸಲಾಯಿತು. ಶಾಂತಿಯುತ ಮತ್ತು ಸಮಾನತೆಯ ಸಮಾಜ ನಿರ್ಮಾಣಕ್ಕೆ ಭಗವಾನ್ ಬುದ್ಧನ ಸಂದೇಶಗಳು ಮಾರ್ಗದರ್ಶಿಯಾಗಿವೆ ಎಂದು ಕೊಡಗು ಜಿಲ್ಲೆ ಉಪವಿಭಾಗಾಧಿಕಾರಿ ನಿತಿನ್ ಚಕ್ಕಿ ತಿಳಿಸಿದ್ದಾರೆ.

<><><><>

**ಸಂಕ್ಷಿಪ್ತ ಸುದ್ದಿ**

೧. ದೇಶದಲ್ಲಿ ಆಳುವ ಸರ್ಕಾರದ ನೀತಿಗಳಿಂದಾಗಿ ಕಾರ್ಮಿಕರ ಭದ್ರತೆಗಾಗಿ ಇರುವ ಕಾನೂನುಗಳು ಹಂತಹಂತವಾಗಿ ಮರೀಚಿಕೆಯಾಗುತ್ತಿವೆ ಎಂದು ಐ.ಎನ್.ಟಿ.ಯು.ಸಿ ಕೋಲಾರ ಜಿಲ್ಲಾ ಅಧ್ಯಕ್ಷ ಹೊನ್ನೇನಹಳ್ಳಿ ಯಲ್ಲಪ್ಪ ತಿಳಿಸಿದ್ದಾರೆ. ಕಾರ್ಮಿಕರ ಹಕ್ಕುಗಳು ಸಮರ್ಪಕವಾಗಿ ಜಾರಿ ಮಾಡಲು ಸಂಘಟಿತ ಹೋರಾಟ ಅನಿವಾರ್ಯವಾಗಿದೆ ಎಂದು ಹೇಳಿದ್ದಾರೆ.

೨. 'ಹಜೂರ್ ಸಾಹಿಬ್ ನಾಂದೇಡ್ ಎಕ್ಸ್‌ಪ್ರೆಸ್ ರೈಲು ಸೇರಿದಂತೆ ಕೆಲ ರೈಲುಗಳು ಕೆಎಸ್‌ಆರ್ ಬೆಂಗಳೂರು, ಯಶವಂತಪುರ ಮತ್ತು ಯಲಹಂಕ ಮಾರ್ಗವಾಗಿ ಸಂಚರಿಸಲಿದ್ದು ಬೆಂಗಳೂರು ಕಂಟೋನ್ಮೆಂಟ್ ನಿಲ್ದಾಣದ ನಿಲುಗಡೆ ಇರುವುದಿಲ್ಲ ಎಂದು ನೈಋತ್ಯ ರೈಲ್ವೆ ಬೆಂಗಳೂರು ವಲಯದ ಸಾರ್ವಜನಿಕ ಸಂಪರ್ಕ ಅಧಿಕಾರಿ ಪ್ರಾಣೇಶ್ ತಿಳಿಸಿದ್ದಾರೆ.

೩.ಇದೇ ಭಾನುವಾರ ಬೆಂಗಳೂರಿನ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನೀಟ್ ಪರೀಕ್ಷೆ ನಡೆಯಲಿದೆ. ಪರೀಕ್ಷೆಗಳನ್ನು ಸುಗಮವಾಗಿ ಹಾಗೂ ವ್ಯವಸ್ಥಿತವಾಗಿ ನಡೆಸುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಜೆರಾಕ್ಸ್ ಹಾಗೂ ಕಂಪ್ಯೂಟರ್ ಸೆಂಟರ್‌ಗಳನ್ನು ಮುಚ್ಚುವಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತರು ಸೂಚಿಸಿದ್ದಾರೆ.

<><> ಮುಕ್ತಾಯ <><>